ಸದಸ್ಯರ ಹೆಸರು: ಶ್ರೀ ಪೂಜಾರ್ ಪಿ.ಹೆಚ್.(ಬಾಗಲಕೋಟೆ)

ಉತ್ತರಿಸುವ ಸಚಿವರು: ಶ್ರೀ ಎಂ.ಮಲ್ಲಿಕಾರ್ಜುನ ನಾಗಪ್ಪ(ಪೌರಾಡಳಿತ ರಾಜ್ಯ ಸಚಿವರು)

ಪ್ರಶ್ನೆ

ಅ) ರಾಜ್ಯದ ಎಲ್ಲಾ ನಗರಗಳು ಹಾಗೂ ಗ್ರಾಮಗಳ ಯೋಜನಾಬದ್ಧ ಅಭಿವೃದ್ಧಿಗೆ ಅನುಕೂಲವಾಗುವಂತೆ ಈಗಿರುವ ಸಂವಿಧಾನವನ್ನು ತಿದ್ದುಪಡಿ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆಯೇ?

ಆ) ಈ ಕುರಿತು ನೀತಿ ರೂಪಿಸಲು ಸಮಿತಿಯೊಂದನ್ನು ರಚಿಸಲಾಗಿದೆಯೇ? ಹಾಗಿದ್ದಲ್ಲಿ ಸಮಿತಿಯಲ್ಲಿನ ಸದಸ್ಯರು ಯಾರು? ಸಮಿತಿ ಬೇರೆ ಯಾವ ವಿಷಯಕ್ಕೆ ಸಂಬಂಧಪಟ್ಟಂತೆ ವರದಿ ನೀಡಲಿದೆ?

ಇ) ಈಗಾಗಲೇ ಸಮಿತಿಯು ತನ್ನ ವರದಿಯನ್ನು ನೀಡಿದೆಯೇ; ಹಾಗಿದ್ದಲ್ಲಿ ವರದಿಯಲ್ಲಿ ಪ್ರಸ್ತಾಪಿಸಲಾಗಿರುವ ಪ್ರಮುಖ ಅಂಶಗಳು ಯಾವುವು?

ಉತ್ತರ

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಳಗಾಂ ನಗರದ ಅಭಿವೃದ್ಧಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 91(202)

ಸದಸ್ಯರ ಹೆಸರು: ಶ್ರೀ ಮನೋಹರ್ ಪುನ್ನಪ್ಪ ಕಾಡೋಲ್ಕರ್(ಉಚ್ಚಗಾಂವ್)

ಉತ್ತರಿಸುವ ಸಚಿವರು: ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು)

ಪ್ರಶ್ನೆ

1) ಬೆಳಗಾಂ ನಗರದ ಅಭಿವೃದ್ಧಿಗಾಗಿ ರೂ.100.00 ಕೋಟಿಗಳನ್ನು ಬಿಡುಗಡೆ

ಮಾಡುವುದಾಗಿ ಮಾನ್ಯ ಮುಖ್ಯಮಂತ್ರಿಗಳು ಭರವಸೆ ಕೊಟ್ಟಿರುವುದು ನಿಜವೇ?

2) ಹಾಗಾದರೆ ಹಣ ಬಿಡುಗಡೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಉತ್ತರ

1 ಮತ್ತು 2) ಬೆಳಗಾಂ ಮಹಾನಗರ ಪಾಲಿಕೆಯ ಸರ್ವ ಭಾಷಿಕರ ಸಮ ವಿಚಾರ ವಿಕಾಸ ವೇದಿಕೆ, ಬೆಳಗಾಂ, ಇವರು ಮಾನ್ಯ ಮುಖ್ಯಮಂತ್ರಿಯವರಿಗೆ ಸಲ್ಲಿಸಿರುವ ಮನವಿಯಲ್ಲಿ ಬೆಳಗಾಂ ಮಹಾನಗರಕ್ಕೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಸಲುವಾಗಿ 100.00 ಕೋಟಿ ರೂ.ಗಳನ್ನು ಮಂಜೂರು ಮಾಡುವಂತೆ ಕೋರಿದ್ದು, ಮಾನ್ಯ ಮುಖ್ಯಮಂತ್ರಿಯವರು ವೇದಿಕೆಯ ಕೋರಿಕೆಯನ್ನು ಪರಿಗಣಿಸಲು ಸೂಚಿಸಿರುವರು. ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಶಿವಮೊಗ್ಗ ನಗರಕ್ಕೆ ಕುಡಿಯುವ ನೀರಿನ ಸಮಸ್ಯೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 92(306)

ಸದಸ್ಯರ ಹೆಸರು: ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ)

ಉತ್ತರಿಸುವ ಸಚಿವರು: ಶ್ರೀ ಎಸ್.ಎಂ.ಕೃಷ್ಣ(ಮುಖ್ಯ ಮಂತ್ರಿಯವರು)

ಪ್ರಶ್ನೆ

1. ಶಿವಮೊಗ್ಗ ನಗರದ ಕುಡಿಯುವ ನೀರಿನ ವಿಸ್ತರಣಾ ಯೋಜನೆ ಸರ್ಕಾರದ ಮುಂದಿದೆಯೇ? ಇಲ್ಲವಾದಲ್ಲಿ ನಗರದ ನೀರು ಸರಬರಾಜು ವ್ಯವಸ್ಥೆಯಲ್ಲಿ ಇರುವ ನ್ಯೂನತೆಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಉತ್ತರ

1. ಶಿವಮೊಗ್ಗ ನಗರಸಭೆಯು ರೂ.445 ಲಕ್ಷಗಳನ್ನು ಸರ್ವೆ ಕಾರ್ಯಕ್ಕಾಗಿ ಮಂಡಲಿಗೆ ತುಂಬ ಬೇಕಾಗಿರುತ್ತದೆ. ಆದಾಗ್ಯೂ ಸಹ ಶಿವಮೊಗ್ಗ ನಗರದ ಕುಡಿಯುವ ನೀರಿನ ವಿಸ್ತರಣಾ ಯೋಜನೆಯ ಕಾರ್ಯ ಸಾಧ್ಯತಾ ವರದಿಯನ್ನು ತಯಾರಿಸಿದ್ದು, ರೂ.40.00 ಕೋಟಿಗಳ ಅಂದಾಜು ತಾಂತ್ರಿಕ ಪರಿಶೀಲನಾ ಹಂತದಲ್ಲಿದೆ.